# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 18, ರಾಧಾಕೃಷ್ಣ ದೇವಸ್ಥಾನ.**

**ಸಂಖ್ಯೆ: ಸ.ಅ/ವಾ-18/ಪಿ.ಆರ್/01/2021-22** **ದಿನಾಂಕ:-20-07-2021**

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/ 2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ: 17-07-2021 ರಂದು ವಾರ್ಡ್ ನಂ:18, ರಾಧಾಕೃಷ್ಣ ದೇವಸ್ಥಾನದ, ವಾರ್ಡ್ ಸಮಿತಿ ಸಭೆಯ ನಡವಳಿಗಳು.

**:: ಸಭೆಗೆ ಹಾಜರಾಗಿದ್ದವರ ವಿವರಗಳು ::**

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1. | ಶ್ರೀ.ಎಸ್.ಬಸವರಾಜು. ಭಾ.ಆ.ಸೇ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಶ್ರೀ. ಈ.ಈರಣ್ಣ. | ಸದಸ್ಯ ಕಾರ್ಯದರ್ಶಿ ವಾಡ್ ನಂ: 18 |
| 3. | ಶ್ರೀ. ನಿರಂಜನಮೂರ್ತಿ | ಸಹಾಯಕ ಕಂದಾಯ ಅಧಿಕಾರಿ (ಹೆಬ್ಬಾಳ) |
| 4. | ಶ್ರೀ. ವಿವೇಕ್ | ಕಿರಿಯ ಆರೋಗ್ಯ ಪರಿವೀಕ್ಷಕರು (ವಾರ್ಡ್ ನಂ.18) |
| 5. | ಶ್ರೀಮತಿ ಸಾಕೀರ್ ಉನ್ನೀಸಾ | ಜಲಮಾಪಕ ಓದುಗಾರರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 6. | ಶ್ರೀಮತಿ ಮಮತ. | ಹಿರಿಯ ಆರೋಗ್ಯ ಪರಿವೀಕ್ಷಕರು (ವಾರ್ಡ್ ನಂ.18) |
| 7. | ಶ್ರೀ. ವಿಜ್ಞಾನಗೌಡ. | ಕ್ಷೇಮಾಭಿವೃದ್ಧಿ ಸಂಘಗಳ ಸಂಯೋಜಕರು |

ಪ್ರಾರಂಭಿಕವಾಗಿ ಸಭೆಯನ್ನು ಉದ್ದೇಶಿಸಿ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್‌ನಲ್ಲಿರುವ ನಿವಾಸಿಗಳ ಕ್ಷೇಮಾಬಿವೃದ್ಧಿ ಸಂಘದವರನ್ನು ಹಾಗೂ ಅಧಿಕಾರಿಗಳನ್ನು ಸ್ವಾಗತಿಸಿದರು.

ಸಭೆಯ ಅಧ್ಯಕ್ಷರು, ಅಧಿಕಾರಿ ನೌಕರುಗಳು ಮತ್ತು ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು ಸೇರಿ ಸ್ವ-ಪರಿಚಯ ಮಾಡಿಕೊಳ್ಳಲಾಯಿತು.

ವಾರ್ಡಿನ ಅಧ್ಯಕ್ಷರು ಮಾತನಾಡುತ್ತಾ ವಾರ್ಡಿನಲ್ಲಿ ಅಭಿವೃದ್ಧಿಯಾಗಬೇಕಾಗಿರುವ ಹಾಗೂ ಕುಂದು ಕೊರತೆಗಳ ಬಗ್ಗೆ ಚರ್ಚಿಸಲಾಯಿತು.

1. ಬಿ.ಇ.ಎಲ್ ರಸ್ತೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರು ಅಗೆದಿರುವ ರಸ್ತೆಯನ್ನು ಯಥಾಸ್ಥಿತಿಗೆ ತರುವಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರಿಗೆ ತಿಳಿಸಲು ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಅಧ್ಯಕ್ಷರು ಸೂಚಿಸಿದರು.
2. ಹೆಚ್.ಎ.ಜಿ ಕಾಲೋನಿಯ 3 ಮತ್ತು 4ನೇ ಮುಖ್ಯರಸ್ತೆಯ ಮದ್ಯಭಾಗದಲ್ಲಿ ಹಾದುಹೋಗುವ ಮಳೆನೀರು ಗಾಲುವೆಯಲ್ಲಿ ಹರಿಯುತ್ತಿರುವ ಕೊಳಚೆ ನೀರನ್ನು ಪತ್ತೆಹಚ್ಚಿ ಸ್ಥಗಿತಗೊಳಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಅಧ್ಯಕ್ಷಕರು ಸೂಚಿಸಿದರು.
3. ಹೆಚ್.ಎ.ಜಿ ಕಾಲೋನಿಯ 1ನೇ ಮುಖ್ಯರಸ್ತೆಯಲ್ಲಿ ಸ್ಥಗಿತಗೊಂಡಿರುವ ಪಾದಚಾರಿ ಮಾರ್ಗದ ಕಾಮಗಾರಿಯನ್ನು ಕೂಡಲೇ ಪ್ರಾರಂಭಿಸಿ ಪೂರ್ಣಗೊಳಿಸಲು ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಅಧ್ಯಕ್ಷರು ಸೂಚಿಸಿದರು.
4. ವಾರ್ಡ್‌ನಲ್ಲಿ ದುರಸ್ಥಿಯಲ್ಲಿರುವ ಬೀದಿ ದೀಪಗಳನ್ನು ಸರಿಪಡಿಸಲು ಕಿರಿಯ ಅಭಿಯಂತರರು ಬಿ.ಬಿ.ಎಂ.ಪಿ ವಿದ್ಯುತ್ ರವರಿಗೆ ತಿಳಿಸಲು ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಅಧ್ಯಕ್ಷರು ಸೂಚಿಸಿದರು.
5. ವಿಷ್ಪರಿಂಗ್ ಮೆಡೋಸ್‌ನ ಮುಂಭಾಗದಲ್ಲಿ ಶೇಖರಣೆ ಮಾಡಲಾಗಿರುವ ಹೂಳನ್ನು ತೆರವುಗೊಳಿಸಲು ಬೃಹತ್ ಮಳೆನೀರು ಗಾಲುವೆಯ ಸಹಾಯಕ ಅಭಿಯಂತರರಿಗೆ ತಿಳಿಸಲು ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಅಧ್ಯಕ್ಷರು ಸೂಚಿಸಿದರು.

6. ಪಾದಚಾರಿ ಮಾರ್ಗವನ್ನು ಒತ್ತುವರಿ ಮಾಡಿಕೊಂಡು ವ್ಯಾಪಾರ ನಡೆಸುವ ಬೀದಿ ಬದಿ ವ್ಯಾಪಾರಿಗಳನ್ನು ಆಗಿದ್ದಾಂಗ್ಗೆ ತೆರವುಗೊಳಿಸಲು ಅಧ್ಯಕ್ಷರು ಸಭೆಯಲ್ಲಿ ಹಾಜರಿದ್ದ ಸಂಚಾರಿ ಪೊಲೀಸರಿಗೆ ಸೂಚಿಸಿದರು.

ಈ ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 18 ರಾದಾಕೃಷ್ಣ ದೇವಸ್ಥಾನ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 18, ರಾದಾಕೃಷ್ಣ ದೇವಸ್ಥಾನ